ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಕರೋನಾ ಲಾಕ್‌ಡೌನ್ ಮತ್ತು ಘೋಷಣೆ ಮಾಡಿರುವ ಪ್ಯಾಕೇಜ್ ಕುರಿತು

ಶ್ರೀ ಕೆ. ಹರೀಶ್ ಕುಮಾರ್(ವಿಧಾನ ಸಭೆಯಿಂದ ಚುನಾಯಿತರಾದವರು) –

32 (74) ಮಾನ್ಯ ಕಾರ್ಮಿಕ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರೋನಾ ಲಾಕ್‌ಡೌನ್‌ನಿಂದಾಗಿ ರಾಜ್ಯದಲ್ಲಿ ಆರ್ಥಿಕ ಸಂಕಷ್ಟದ ನಡುವೆ ಹೂವು ಬೆಳೆದ ರೈತರು, ಕ್ಷೌರಿಕರು, ನೇಕಾರರು, ಕುಲಕಸುಬು ಆಧಾರಿತ ಶ್ರಮಿಕರು, ಕಟ್ಟಡ ಕಾರ್ಮಿಕರಿಗೆ ಘೋಷಣೆ ಮಾಡಿದ್ದ ಪ್ಯಾಕೇಜ್‌ನ್ನು ಎಷ್ಟು ಜನ ಫಲಾನುಭವಿಗಳು ಪಡೆದಿದ್ದಾರೆ; (ಮಾಹಿತಿ ನೀಡುವುದು)

(ಆ) ಕರೋನಾ ಲಾಕ್‌ಡೌನ್ ಸಂದರ್ಭದಲ್ಲಿ ಕಟ್ಟಡ ಕಾರ್ಮಿಕರಿಗೆ ಆಹಾರದ ಕಿಟ್, ಊಟ ಮತ್ತು ಪರಿಹಾರದ ಧನ 5 ಸಾವಿರ ರೂಪಾಯಿಗಳನ್ನು ನೀಡಲಾಗಿದೆಯೇ ; ಪ್ರಸ್ತುತ ಎಷ್ಟು ಜನ ಫಲಾನುಭವಿಗಳು ಸದರಿ ಪರಿಹಾರದ ಮೊತ್ತವನ್ನು ಪಡೆದಿರುತ್ತಾರೆ;

(ಇ) ಕರೋನಾ ಲಾಕ್‌ಡೌನ್ ಸಮಯದಲ್ಲಿ ಕಾರ್ಮಿಕರನ್ನು ತಮ್ಮ-ತಮ್ಮ ಊರುಗಳಿಗೆ ಕಳುಹಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳ ವಿವರ ನೀಡುವುದು ?